# <u>ಪ್ರಧಾನ ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ ನ್ಯಾಯಾಲಯ, ಹೊನ್ನಾಳಿ</u>

## <u>ಸಿ.ಸಿ. 506/2018</u>

<u>ಸಾಕ್ಷಿದಾರರ ಹೇಳಿಕೆಃ</u>

| | | |
|---|---|---|
| **ಹೆಸರು** | : ವಿಶ್ವನಾಥ | ಚಾಸಾಃ **11** ಪ್ರಾಸಾಃ **4** |
| **ತಂದೆಯ ಹೆಸರು** | : ರಾಜಪ್ಪ | |
| **ವಯಸ್ಸು** | : 44 ವರ್ಷ | |
| **ವೃತ್ತಿ** | : ವ್ಯವಸಾಯ | |
| **ವಾಸಸ್ಥಳ** | : ಅರಕೆರೆ ಗ್ರಾಮ | |

ದಿನಾಂಕಃ **06-12-2023** ರಂದು ಸಾಕ್ಷಿಯನ್ನು ಕರೆದು ಪ್ರಮಾಣವಚನ ಬೋಧಿಸಲಾಯಿತು.

<u>ಮುಖ್ಯ ವಿಚಾರಣೆ :-ಮಾನ್ಯ ಸ.ಸ.ಅ. ರವರಿಂದಃ</u>

ನಾನು ಪೊಲೀಸರ ಕೋರಿಕೆಯ ಮೇರೆಗೆ ಒಂದು ದಾಖಲೆಗೆ ಸಹಿಯನ್ನು ಮಾಡಿರುತ್ತೇನೆ. ಅದರಲ್ಲಿ ಏನು ಬರೆದಿದೆ ಎಂದು ನನಗೆ ಗೊತ್ತಿಲ್ಲ. ಪೊಲೀಸರು ನನ್ನ ಸಮಕ್ಷಮ ಯಾವುದೇ ಮಹಜರ್ ಕ್ರಮ ಜರುಗಿಸಿ, ಯಾವುದೇ ವಾಹನಗಳನ್ನು ಅಮಾನತ್ತು ಪಡಿಸಿಕೊಂಡಿರುವುದಿಲ್ಲ.

ಅಮಾನತ್ತು ಮಹಜರ್ ನ್ನು ನಿಪಿ-4 ಎಂದು, ಸಾಕ್ಷಿಯ ಸಹಿಯನ್ನು ನಿಪಿ-4(ಎ) ಎಂದು ಗುರುತಿಸಲಾಯಿತು. ಸಾಕ್ಷಿಯು 1 ಛಾಯಾಚಿತ್ರದಲ್ಲಿ ತಾನು ಇರುವ ಬಗ್ಗೆ ನೋಡಿ ಗುರುತಿಸಿದ್ದು , ಆದರೆ ಯಾವ ವಿಚಾರಕ್ಕೆ ಎಂದು ನನಗೆ ಗೊತ್ತಿಲ್ಲ, ಅದನ್ನು ನಿಪಿ-5 ಎಂದು, ಸಿಡಿಯನ್ನು ನಿಪಿ-6 ಎಂದು ಗುರುತಿಸಲಾಯಿತು. ನಾನು ಪೊಲೀಸರಿಗೆ ಯಾವುದೇ ಹೇಳಿಕೆಯನ್ನು ನೀಡಿರುವುದಿಲ್ಲ.

ಸದರಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಮಾನ್ಯ ಸ.ಸ.ಅ. ರವರು ಅನುಮತಿ ಕೋರಿದ್ದಾರೆ. ಸೂಕ್ತ ಕಾರಣ ನೀಡಿದ ಮೇರೆಗೆ ಅನುಮತಿ ನೀಡಲಾಗಿದೆ.

<u>ಪಾಟೀ ಸವಾಲುಃ ಸ.ಸ.ಅ. ರವರಿಂದಃ</u>

ದಿಃ 30-08-2017 ರಂದು ಪೊಲೀಸರು ನನ್ನ ಮತ್ತು ಚಾಸಾ-12 ರವರ ಸಮಕ್ಷಮ ಬೆಳಗ್ಗೆ 10.45 ರಿಂದ 11.45 ಗಂಟೆ ಸಮಯದವರೆಗೆ ಹೊನ್ನಾಳಿ ಪೊಲೀಸ್ ಠಾಣೆಯ ವಸತಿ ಗೃಹಗಳ ಆವರಣದಲ್ಲಿ ಕೆಎ-17-ಎ-1699 ಆಟೋವನ್ನು ಮತ್ತು ಕೆಎ-14-ಇಜಿ-5577 ಮೋಟಾರ್ ಸೈಕಲ್

ನ್ನು ಅಮಾನತ್ತು ಪಡಿಸಿಕೊಂಡು ನಿಪಿ-4 ರಂತೆ ಅಮಾನತ್ತು ಮಹಜರ್ ಕ್ರಮ ಜರುಗಿಸಿ , ನಿಪಿ-5 ರಂತೆ ಛಾಯಾಚಿತ್ರವನ್ನು ತೆಗೆದುತ್ತಾರೆ ಎಂದರೆ ಸರಿಯಲ್ಲ. ಈ ಬಗ್ಗೆ ನಿಪಿ -7 ರಂತೆ ಹೇಳಿಕೆಯನ್ನು ನೀಡಿರುತ್ತೇನೆ ಎಂದರೆ ಸರಿಯಲ್ಲ.

ಎಲ್ಲಾ ವಿಚಾರ ಗೊತ್ತಿದ್ದರೂ ಸಹ ಆರೋಪಿಗೆ ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆಂದರೆ ಸರಿಯಲ್ಲ.

ಆರೋಪಿ ಪರ ವಕೀಲರು ಪಾಟೀ ಸವಾಲು ಇಲ್ಲ ಎಂದು ತಿಳಿಸಿರುತ್ತಾರೆ.

ಸಾ. ಹೇ. ತೆ. ನ್ಯಾ. ಬೆ. ಮಾಡಿಸಲಾಯಿತು.

ಓ. ಹೇ. ಕೇ. ಸ. ಇದೆ.

ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು
ಜೆ.ಎಂ.ಎಫ್.ಸಿ., ಹೊನ್ನಾಳಿ.